# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಮಯಾದೇವಿ ರಾಜ್‌ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟೆ ಗ್ರಾಮ ಪಂಚಾಯಿತಿ, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/430/ಗ್ರಾಪಂಕಾ/2016 ದಿನಾಂಕ:06.09.2016.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-1/DE/369 /2016/ARE-10 Date:14.05.2018.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1/DE/369 /2016/ARE-10 Date:16.05.2018.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/430/ಗ್ರಾಪಂಕಾ/2016 ದಿನಾಂಕ:28.05.2018.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶದಲ್ಲಿ ಶ್ರೀ ಮಯಾದೇವಿ ರಾಜ್‌ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟೆ ಗ್ರಾಮ ಪಂಚಾಯಿತಿ, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ"

"That, yout DGO Smt. Mayadevi Rajkumar, Panchayath Development Officer, Madakatte Gram Panchayath, Bhalki Taluk, Bidar District, inspite of carrying out the work under MGNREGA scheme for the year 2011-12 through JCB machineries, raised bogus bills in the name of the labourers and drawn the entire amount by paying only Rs.100/- or Rs. 200/- to the labourers, included the name of one Sri. Lakkappa Shivalingappa Benkere who is blind for the past 5-6 years and who cannot walk without the assistance of another person, Rs.18,205/- has been deposited to his account at Punjab National Bank, Dadagi Branch, one Sri. Lakkappa, Sri. Shivalingappa, Smt. Mallamma and Sri. Shivaraj were not eligible for job cards. But job cards were provided to them. Thereby you DGO paid the money to ineligible labourers, deposited the wages to the bank account of ineligible candidates. Thereby, you DGO, being a Government/Public servant has failed to maintain absolute integrity besides devotion to duty and acted in a manner unbecoming of a Government servant and thus committed misconduct as enumerated U/R 3(1) of Karnataka Civil Service (Conduct) Rules 1966".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಮಯಾದೇವಿ ರಾಜ್‌ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟೆ ಗ್ರಾಮ ಪಂಚಾಯಿತಿ, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಮಯಾದೇವಿ ರಾಜ್‌ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟೆ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸಿದ ವೇಳೆಯಲ್ಲಿ 2011-12 ನೇ ಸಾಲಿನ MGNREGA ಯೋಜನೆಯಡಿ ನಡೆಸಿದ ಅವ್ಯವಹಾರವು ಸಾಬೀತಾಗಿರುವುದರಿಂದ ಸದರಿಯವರಿಗೆ ಮುಂದಿನ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಯಿಡಿಯುವ ದಂಡನೆ ವಿಧಿಸುವ ಜೊತೆಗೆ ಇವರ ವೇತನ ಮತ್ತು ಇನ್ನಿತರ ಭತ್ಯೆಗಳಿಂದ ರೂ.18,250/- ಗಳನ್ನು ವಸೂಲಿ ಮಾಡುವ ದಂಡನೆ ವಿಧಿಸುವುದಕ್ಕಾಗಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಶ್ರೀ ಮಯಾದೇವಿ ರಾಜ್‌ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟೆ ಗ್ರಾಮ ಪಂಚಾಯಿತಿ, ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ಕಾಲಮಿತಿಯೊಳಗೆ ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ. ಆದ್ದರಿಂದ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

In the cross examination made by Presenting Officer, DW-1 has denied that under MGNREGA Scheme without using man power she has executed the work with the help of machineries. She denies that though the work was executed with the help of machineries the amount was credited to the bank account of the labourers and later she has withdrawn said amount by paying Rs.100 or Rs.200 to each labourers. She has not seenthat Sri.Lakkappa Shivalingappa Benikere is blind by birth. She denies that a sum of Rs. 7,000/- and Rs. 11,500/- was deposited to the bank account of Lakkapp Shivalingappa Benikere to Panjab National Bank.

Fruther DW-1 admits that she is the supervising authority over the Gram Panchayath staff and secretary, work and payment. She has not brought to the notice of the Taluk Panchyath regarding the issurance of the job cards in writing. She denies that she has committed dereliction of duty.

In the written statement itself, DGO has stated that the Gram Panchayath President and computer operator colluded together, without her signatures have issued bogus job cards to Sri. Lakappa Shivalingappa Benikere, Smt. Malamma Shivaraj. If those persons were not entitled to get the job cards it was the duty of the DGO to bring the facts to higher authorities immediately to cancel the same. But the DGO has not taken any steps to cancel the bogus job cards. DGO has not denied that Sri. Lakkappa Shivalingappa Benikere is blind by birth. She has deposed that she has not seen that Sri. Lakkappa Shivalingappa Benikere is blind by birth. The photographs Ex.P.5 shows the blind person. The above said blind person and bogus job card holders have not at all worked under MGNREGA Scheme but the amount was deposited to their bank accounts. These facts show that with the help of machinery has executed the work and not with help of man power.

The oral and documentary evidence on record shows that the DGO while working as Panchayath Development Officer in Madakatte Grama Panchayath, Bhalki Taluk, Bidar District inspite of carrying out the work under MGNREGA scheme for the year 2011-12 through JCB machineries, raised bogus bills in the name of the labourers and drawn the entire amount by paying only Rs. 100/- or Rs. 200/- to the labourers, included the name of one Sri. Lakkappa Shivalingappa Benkere who is blind for the past 5-6 years and who cannot walk without the assistance of another person. Rs. 18,250/- has been deposited to his account at Punjab National Bank.

Dadagi Branch, one Sri. Lakkappa, Sri. Shivalingappa, Smt. Mallamma and Sri. Shivaraj were not eligible for jon cards. But job cards were provided to them. Thereby DGO paid the money to ineligible labourers, deposited the wages to the bank account of ineligible candidates.

ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತಾರೆ.

Having regard to the nature of charge proved against DGO Smt. Mayadevi Rajkumar, it is hereby recommended to the Government for imposing penalty of withholding four annual increments payable to DGO Smt. Mayadevi Rajkumar, Panchayath Development Officer, Madakatte Gram Panchayath, Bhalki Taluk, Bidar District, with cumulative effect and also for imposing penalty of recovering the financial loss of Rs.18,250/- from the salary and other allowances payable to DGO Smt. Mayadevi Rajkumar.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಮಯಾದೇವಿ ರಾಜ್‌ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟೆ ಗ್ರಾಮ ಪಂಚಾಯಿತಿ ರವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ, ನಿಬಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುವುದರಿಂದ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 8(iii)(iv) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಸದರಿಯವರಿಗೆ ಮುಂದಿನ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಯಿಡಿಯುವ ದಂಡನೆ ವಿಧಿಸುವ ಜೊತೆಗೆ ಸದರಿಯವರ ವೇತನ ಮತ್ತು ಇನ್ನಿತರ ಭತ್ಯೆಗಳಿಂದ ರೂ. 18,250/- ಗಳನ್ನು ವಸೂಲಿ ಮಾಡುವ ದಂಡನೆಯನ್ನು ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:430:ಗ್ರಾಪಂಕಾ2016 ಬೆಂಗಳೂರು, ದಿನಾಂಕ:12-12-2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು, ಶ್ರೀ ಮಯಾದೇವಿ ರಾಜ್‌ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟೆ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸಿದ ವೇಳೆಯಲ್ಲಿ 2011-12 ನೇ ಸಾಲಿನ MGNREGA ಯೋಜನೆಯಡಿ ನಡೆಸಿದ ಅವ್ಯವಹಾರವು ಸಾಬೀತಾಗಿರುವುದರಿಂದ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 8(iii)(iv) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಸದರಿಯವರಿಗೆ ಮುಂದಿನ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಯಿಡಿಯುವ ದಂಡನೆ ವಿಧಿಸುವ ಜೊತೆಗೆ ಸದರಿಯವರ ವೇತನ ಮತ್ತು ಇನ್ನಿತರ ಭತ್ಯೆಗಳಿಂದ ರೂ. 18,250/- ಗಳನ್ನು ವಸೂಲಿ ಮಾಡುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

12/12

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೀದರ್ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ.
6. ಶ್ರೀ ಮಯಾದೇವಿ ರಾಜ್‌ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮದಕಟ್ಟೆ ಗ್ರಾಮ ಪಂಚಾಯಿತಿ, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.